Bangalore
Regional News
27.08.2025: 14.30hrs
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು:

1. ನಾಡಿನೆಲ್ಲೆಡೆ ಗಣೇಶ ಹಬ್ಬದ ಸಂಭ್ರಮ; ಮೈಸೂರು ಅರಮನೆಯಲ್ಲಿ ಗಜಪಡೆಗಳಿಗೆ ವಿಶೇಷ ಪೂಜೆ

2. ಮಳೆಯಿಂದ ಹಾನಿಗೀಡಾದ ೧೦೦ ಶಾಲಾ ಕಟ್ಟಡ ಮರುನಿರ್ಮಾಣಕ್ಕೆ ಕ್ರಮ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಭರವಸೆ

3. ಚಾಮುಂಡೇಶ್ವರಿ ಕನ್ನಡ ನಾಡಿನ ಅಧಿದೇವತೆ; ಆಕೆಯ ದರ್ಶನ ಎಲ್ಲರ ಹಕ್ಕು - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಮರ್ಥನೆ

4. ಮಹಾರಾಜ ಟಿ-೨೦ ಕ್ರಿಕೆಟ್ ಟೂರ್ನಿ; ಎರಡನೇ ಕ್ವಾಲಿಫೈಯರ್ ಪಂದ್ಯದಲ್ಲಿಂದು ಬೆಂಗಳೂರು ಬ್ಲಾಸ್ಟರ್ಸ್ ಹಾಗೂ ಮಂಗಳೂರು ಡ್ರ್ಯಾಗನ್ಸ್ ಹಣಾಹಣಿ

*********

ಇಂದು ವಿಘ್ನವಿನಾಶಕ ಗಣೇಶ ಚತುರ್ಥಿಯನ್ನು ರಾಜ್ಯದೆಲ್ಲೆಡೆ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಬೆಂಗಳೂರಿನಲ್ಲಿ ಗಣೇಶ ಹಬ್ಬಕ್ಕೆ ಬಿಬಿಎಂಪಿ ಸಂಪೂರ್ಣ ಸಿದ್ಧತೆ ಮಾಡಿಕೊಂಡಿದೆ. ४೧ ತಾತ್ಕಾಲಿಕ ಕಲ್ಯಾಣಿಗಳು ಮತ್ತು ४೮೯ ಸಂಚಾರಿ ಟ್ಯಾಂಕ್‌ಗಳನ್ನು ಮೂರ್ತಿ ವಿಸರ್ಜನೆಗಾಗಿ ಸಜ್ಜುಗೊಳಿಸಲಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಶ್ರದ್ಧಾಭಕ್ತಿಯಿಂದ ಗಣೇಶನ ಹಬ್ಬವನ್ನು ಆಚರಿಸಲಾಗುತ್ತಿದೆ. ಗಣೇಶ ದೇವಾಲಯಗಳಲ್ಲಿ ವಿಶೇಷ ಅಲಂಕಾರ, ಪೂಜಾ ಕಾರ್ಯಕ್ರಮಗಳು ನಡೆಯುತ್ತಿವೆ. ಸಾರ್ವಜನಿಕ ಸ್ಥಳಗಳಲ್ಲಿ ಪೆಂಡಾಲ್ ಹಾಕಿ ವಿವಿಧ ಮಾದರಿಯ ಗಣೇಶ ಮೂರ್ತಿಗಳನ್ನು ಕೂರಿಸಿ ಪೂಜೆ ಸಲ್ಲಿಸಲಾಗುತ್ತಿದೆ. ಗಣೇಶ ಚತುರ್ಥಿಯಂದು ದೊಡ್ಡಬಳ್ಳಾಪುರದಲ್ಲಿ ನೇಕಾರ ಸಮುದಾಯ ಸಗಣಿಯಲ್ಲಿ ಪಿಳ್ಳೈರಾಯನ್ನು ಪ್ರತಿಷ್ಠಾಪಿಸಿ, ಮಗ್ಗಗಳಿಗೆ ಪೂಜೆ ಸಲ್ಲಿಸುವ ಆಚರಣೆ ವಿಶೇಷವಾಗಿದೆ. ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಗಣೇಶ ಚತುರ್ಥಿಯನ್ನು ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಶೃಂಗೇರಿ ಶಾರದಾ ಪೀಠದ ಶ್ರೀ ವಿನಾಯಕ ದೇವಾಲಯ, ಮಠದ ಗುರು ನಿವಾಸಗಳಲ್ಲಿ ವಿಶೇಷ ಪೂಜಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ದಾವಣಗೆರೆ ನಗರದಲ್ಲಿ ಗಣೇಶ ಮೂರ್ತಿಗಳನ್ನು ನಿಗದಿಪಡಿಸಿದ ಸ್ಥಳಗಳಲ್ಲಿಯೆ ವಿಸರ್ಜನೆ ಮಾಡಲು ೨೦ ಕ್ಕೂ ಅಧಿಕ ಟ್ರಾಕ್ಟರ್ ಗಳನ್ನು ಮಹಾನಗರ ಪಾಲಿಕೆಯಿಂದ ವ್ಯವಸ್ಥೆ

ಮಾಡಲಾಗಿದೆ. ಪಾಲಿಕೆ ನಿಗದಿಪಡಿಸಿದ ಸ್ಥಳಗಳಲ್ಲಿಯೇ ಕಡ್ಡಾಯವಾಗಿ ವಿಸರ್ಜಿಸಬೇಕೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ತಿಳಿಸಿದ್ದಾರೆ.

ಕೋಲಾರ ಜಿಲ್ಲೆಯಾದ್ಯಂತ ಗಣೇಶಮೂರ್ತಿ ಚತುರ್ಥಿಯನ್ನು ಸಂಭ್ರಮ ಸಡಗರದಿಂದ ಆಚರಿಸಲಾಗುತ್ತಿದೆ. ಪ್ರತಿ ಬಡಾವಣೆಗಳಲ್ಲಿ ಮನೆಗಳಲ್ಲಿ ಗಣೇಶ ಪ್ರತಿಷ್ಠಾಪಿಸಿ ಯುವಕರು ಸಂಭ್ರಮಿಸುತ್ತಿದ್ದಾರೆ. ಮುಳಬಾಗಿಲು ಕುರುಡುಮಲೆ ಗಣಪತಿ ದೇವಸ್ಥಾನವನ್ನು ವಿಶೇಷವಾಗಿ ಅಲಂಕರಿಸಲಾಗಿದ್ದು, ಬೆಳಿಗ್ಗೆಯಿಂದಲೇ ವಿಶೇಷ ಪೂಜಾ ಕೈಂಕರ್ಯಗಳು ಜರುಗುತ್ತಿವೆ.

*********

ಸಾಂಸ್ಕೃತಿಕ ನಗರಿ ಮೈಸೂರಿನ ಅರಮನೆಯಲ್ಲಿ ಗಣಪತಿ ಹಬ್ಬವನ್ನು ವಿಶಿಷ್ಟ ರೀತಿಯಲ್ಲಿ ಆಚರಿಸಲಾಗಿದೆ. ವಿಶ್ವ ವಿಖ್ಯಾತ ನಾಡಹಬ್ಬ ದಸರಾ ಮಹೋತ್ಸವದ ಜಂಬೂ ಸವಾರಿಯಲ್ಲಿ ಪಾಲ್ಗೊಳ್ಳುವ  ಗಜಮುಖನ ಪ್ರತೀಕ ವಾಗಿರುವ ಗಜಪಡೆಯ ಎಲ್ಲಾ ಆನೆಗಳಿಗೂ ವಿಶೇಷ ಪೂಜೆ ಸಲ್ಲಿಸಲಾಯಿತು. ಚಿನ್ನದ ಅಂಬಾರಿ ಹೊರುವ ಅಭಿಮನ್ಯು ಗೋಪು ಸುಗ್ರೀವಾ, ಹೇಮಾವತಿ, ರೂಪ ಸೇರಿದಂತೆ ೧೪ ಆನೆಗಳಿಗೂ ಜಿಲ್ಲಾಡಳಿತದ ವತಿಯಿಂದ ಜಿಲ್ಲಾಧಿಕಾರಿ ಲಕ್ಷ್ಮಿಕಾಂತ್ ರೆಡ್ಡಿ, ಸೇರಿದಂತೆ ಹಿರಿಯ ಅಧಿಕಾರಿಗಳು ಪೂಜೆ ಸಲ್ಲಿಸಿದರು. ನಂತರ ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಮಾತನಾಡಿ, ಇಂದು ಗಜಪಡೆಗಳಿಗೆ ವಿಶೇಷ ಪೂಜೆ ಸಲ್ಲಿಸಲಾಗಿದೆ. ಸೆಪ್ಟೆಂಬರ್ ಮೊದಲ ಅಥವಾ ೨ನೇ ವಾರದಲ್ಲಿ ದಸರಾ ಉದ್ಘಾಟಕರು ಮುಖ್ಯಮಂತ್ರಿ, ಹಾಗೂ ರಾಜ್ಯಪಾಲರನ್ನು ಅಧಿಕೃತ ಆಹ್ವಾನಿಸಲಾಗುವುದು ಎಂದು ತಿಳಿಸಿದ್ದಾರೆ. ಈಗಾಗಲೇ ಮೊದಲ ಹಾಗೂ ಎರಡನೇ ತಂಡದ ಒಟ್ಟು ೧೪ ಆನೆಗಳಿಗೆ ಪ್ರತಿದಿನ ಎರಡು ಬಾರಿ ಜಂಬೂ ಸವಾರಿ ಸಾಗುವ ರಾಜಮಾರ್ಗಗಳಲ್ಲಿ ತಾಲೀಮು ನಡೆಸಲಾಗುತ್ತಿದೆ. ಎಲ್ಲಾ ಆನೆಗಳು ಇಲ್ಲಿಯ ವಾತಾವರಣಕ್ಕೆ ಹೊಂದಿಕೊಳ್ಳುತ್ತಿವೆ. ೧೪ ಆನೆಗಳು ಅರೋಗ್ಯಯುತವಾಗಿವೆ ಎಂದು ಹಿರಿಯ ಅರಣ್ಯಾಧಿಕಾರಿ ಪ್ರಭುಗೌಡ ತಿಳಿಸಿದ್ದಾರೆ.

*********

ಧಾರವಾಡ ಜಿಲ್ಲೆಯಲ್ಲಿ ೩೩೦ಕ್ಕೂ ಅಧಿಕ ಶಾಲಾ ಕಟ್ಟಡಗಳು ಮಳೆಯಿಂದಾಗಿ ಹಾನಿಗೀಡಾಗಿದ್ದು, ಈ ಪೈಕಿ ೧೦೦ ಶಾಲಾ ಕಟ್ಟಡಗಳ ಪುನರ್ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಅಧಿಕಾರಿಗಳೊಂದಿಗೆ ಮಳೆಹಾನಿ ಬಗ್ಗೆ ಚರ್ಚೆ ನಡೆಸಿದ ಅವರು, ಸಿಎಸ್‌ಆರ್ ಯೋಜನೆಯಡಿ ನೂರು ಶಾಲಾ ಕಟ್ಟಡಗಳ ಪುನರ್ ನಿರ್ಮಾಣಕ್ಕೆ ಪ್ರಸ್ತಾವನೆ ನೀಡಿದ್ದಾಗಿ ಹೇಳಿದ್ದಾರೆ. ಇನ್ನುಳಿದ ಶಾಲಾ ಕಟ್ಟಡಗಳ ನಿರ್ಮಾಣಕ್ಕೆ ರಾಜ್ಯ ಸರ್ಕಾರ ಮುಂದಾಗಬೇಕು. ಕೂಡಲೇ ಅನುದಾನ ಒದಗಿಸಿ ಕಟ್ಟಡ ನಿರ್ಮಾಣ ಮಾಡಬೇಕೆಂದು

ಸಚಿವ ಪ್ರಲ್ಹಾದ ಜೋಶಿ ಒತ್ತಾಯಿಸಿದ್ದಾರೆ. ಫಸಲ್ ಬಿಮಾ ಯೋಜನೆಯಡಿಯಲ್ಲಿ ಸ್ಥಳೀಯ ವಿಪತ್ತು ಸಮೀಕ್ಷೆ ಪೂರ್ಣಗೊಳಿಸಿ ತ್ವರಿತವಾಗಿ ಸಂಬಂಧಪಟ್ಟ ಬೆಳೆವಿಮಾ ಕಂಪನಿಗೆ ವರದಿ ನೀಡಬೇಕು. ಮಳೆ ಹಾನಿಗೊಳಗಾದ ರೈತರಿಗೆ ಕೂಡಲೇ ಪರಿಹಾರ ದೊರಕಿಸಿಕೊಡುವಂತೆ ಜಿಲ್ಲಾಡಳಿತಕ್ಕೆ ಸೂಚನೆ ನೀಡಿದ್ದಾರೆ. ಧಾರವಾಡ ಜಿಲ್ಲೆಯಲ್ಲಿ ಈ ಬಾರಿ ವಾಡಿಕೆಗಿಂತ ಅತಿ ಹೆಚ್ಚು ಮಳೆ ಸುರಿದಿದ್ದು, ನೂರಾರು ಮನೆ, ಹೊಲ ಹಾಗೂ ಶಾಲಾ ಕಟ್ಟಡಗಳು ಹಾನಿಗೊಳಗಾಗಿವೆ.

*********

ಚಾಮುಂಡೇಶ್ವರಿ ಕೇವಲ ಹಿಂದೂಗಳ ಆಸ್ತಿ ಅಲ್ಲ. ದಸರಾ ಧಾರ್ಮಿಕ ಆಚರಣೆ ಅಲ್ಲ ಎಂದಿದ್ದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಮ್ಮ ಹೇಳಿಕೆಯ ಬಗ್ಗೆ ಸ್ಪಷ್ಟನೆ ನೀಡಿದ್ದಾರೆ. ಎಕ್ಸ್ ನಲ್ಲಿ ಪೋಸ್ಟ್ ಹಂಚಿಕೊಂಡಿರುವ ಅವರು, ನಮ್ಮ ನಾಡ ದೇವತೆ ಚಾಮುಂಡೇಶ್ವರಿ. ಚಾಮುಂಡಿ ತಾಯಿ ನಮ್ಮ ನಾಡಿನ ಅಧಿದೇವತೆ. ಈ ತಾಯಿಯನ್ನು ಆರಾಧಿಸುವವರು, ನಂಬುವವರು, ಗೌರವಿಸುವವರು ಎಲ್ಲ ಜಾತಿ, ಧರ್ಮಗಳಲ್ಲೂ ಇದ್ದಾರೆ. ಆಕೆಯ ದರ್ಶನ ಎಲ್ಲರ ಹಕ್ಕು. ವಿವಾದ ಮಾಡೋದು ಬಿಜೆಪಿ ತತ್ವ ಎಂದಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಮೈಸೂರಿನ ಮಹರಾಜರು ವಿದೇಶಿಯರನ್ನು ಅಹ್ವಾನಿಸುತ್ತಿದ್ದರು. ಅವರೆಲ್ಲ ಯಾವ ಧರ್ಮಕ್ಕೆ ಸೇರಿದವರು ಎಂದು ಪ್ರಶ್ನಿಸಿದ್ದಾರೆ.

*********

ಮಂಡ್ಯ ಜಿಲ್ಲೆಯಲ್ಲಿ ಪ್ರಸ್ತುತ ಯೂರಿಯಾ, ಡಿಎಪಿ, ಎಂಒಪಿ, ಎಸ್ಎಸ್ ಪಿ, ಕಾಂಪ್ಲೆಕ್ಸ್ ಸೇರಿದಂತೆ ೨೪ ಸಾವಿರದ ೪೭೧ ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನು ಲಭ್ಯವಿದೆ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ ತಿಳಿಸಿದ್ದಾರೆ. ರಸಗೊಬ್ಬರ ಸಮರ್ಪಕವಾಗಿ ನಿರ್ವಹಣೆ ಕುರಿತು ನಿನ್ನೆ ಆಯೋಜಿಸಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ತಾಲ್ಲೂಕುವಾರು ತಹಶೀಲ್ದಾರ್‌ಗಳು ಹಾಗೂ ಕೃಷಿ ಇಲಾಖೆಯ ಅಧಿಕಾರಿಗಳು ರಸಗೊಬ್ಬರ ಅಂಗಡಿಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸುವಂತೆ ಸೂಚಿಸಿದ್ದಾರೆ. ರಸಗೊಬ್ಬರ ಅಂಗಡಿಗಳಲ್ಲಿ ಗೊಬ್ಬರ ದಾಸ್ತಾನುಗಳ ಉಳಿಕೆ , ಗೊಬ್ಬರಗಳ ದರ ನಮೂದಿಸಿರುವ ಬಗ್ಗೆ ಪರಿಶೀಲಿಸಿಸುವಂತೆ ತಿಳಿಸಿದ್ದಾರೆ. ಕಾಳಸಂತೆ ಹಾಗೂ ರಸಗೊಬ್ಬರ ಅಂಗಡಿಗಳಲ್ಲಿ ಗೊಬ್ಬರಗಳನ್ನು ಹೆಚ್ಚಿನ ದರಕ್ಕೆ ಮಾರಾಟವಾಗದಂತೆ ಅಧಿಕಾರಿಗಳು ನಿಗಾ ವಹಿಸಬೇಕು. ಜಿಲ್ಲೆಯಲ್ಲಿ ರಸಗೊಬ್ಬರ ಕೊರತೆ ಉಂಟಾಗದಂತೆ ನೋಡಿಕೊಳ್ಳಿ ಎಂದು ಸಲಹೆ ನೀಡಿದ್ದಾರೆ.

*********

ಬೀದಿ ನಾಯಿ ಹಾವಳಿಯಿಂದ ಉಂಟಾಗುವ ಅನಾಹುತ ತಪ್ಪಿಸಲು ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಅರಿವು ಮೂಡಿಸುವ ಮೂಲಕ ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಿ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಎ.ಬಿ ಬಸವರಾಜು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ೨೦೨೫-೨೬ನೇ ಸಾಲಿನಲ್ಲಿ ರೇಬಿಸ್ ಮಾಸಾಚರಣೆ ಚಟುವಟಿಕೆ ನಡೆಸಲು ಪ್ರಾಣಿ ಕಲ್ಯಾಣ ಮಂಡಳಿಯಿಂದ ಜಿಲ್ಲೆಗೆ ೨೦ ಸಾವಿರ ರೂಪಾಯಿ ಅನುದಾನ ನೀಡಲಾಗಿದೆ. ಜಿಲ್ಲೆಯಲ್ಲಿ ಅನಗತ್ಯವಾಗಿ ಪ್ರಾಣಿಗಳನ್ನು ಬಳಸಿಕೊಂಡರೆ ಕಾನೂನು ಕ್ರಮ ಕೈಗೊಳ್ಳಲಾಗುವುದು. ನಾಯಿ ತಳಿ ಸಂವರ್ಧನೆ ಮತ್ತು ಮಾರಾಟ ಕೇಂದ್ರಗಳು ಇದ್ದಲ್ಲಿ ಕಡ್ಡಾಯವಾಗಿ ಪ್ರಾಣಿ ಕಲ್ಯಾಣ ಮಂಡಳಿಯಲ್ಲಿ ನೋಂದಣಿ ಮಾಡಿಕೊಳ್ಳಬೇಕು ಎಂದು ತಿಳಿಸಿದ್ದಾರೆ.

*********

ಕುದ್ರೋಳಿ ಗೋಕರ್ಣನಾಥ ಕ್ಷೇತ್ರದ ನವರಾತ್ರಿ ಉತ್ಸವ ಸೆಪ್ಟೆಂಬರ್ ೨೨ರಿಂದ ಅಕ್ಟೋಬರ್ ೨ರವರೆಗೆ ನಡೆಯಲಿದ್ದು, ದಸರಾ ಯಶಸ್ವಿಗೆ ಸಕಲ ಸಿದ್ಧತೆ ಆರಂಭಿಸಲಾಗಿದೆ ಎಂದು ಕುದ್ರೋಳಿ ಶ್ರೀ ಗೋಕರ್ಣನಾಥ ಕ್ಷೇತ್ರದ ಕೋಶಾಧಿಕಾರಿ ಪದ್ಮರಾಜ್ ತಿಳಿಸಿದ್ದಾರೆ. ಮಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಬಾರಿ ದಿನಕ್ಕೊಂದು ವೈವಿಧ್ಯತೆಯೊಂದಿಗೆ ಮಂಗಳೂರು ದಸರಾ ವೈಭವ ಮೂಡಿಬರಲಿದೆ. ರಾಜ್ಯದ ವಿವಿಧ ಭಾಗಗಳಿಂದ ಕಲಾ ತಂಡಗಳು ಆಗಮಿಸಲಿವೆ. ೩೧ ತಂಡಗಳಲ್ಲಿ ಸುಮಾರು ೮೦೦ ಕಲಾವಿದರು ಕಲಾಪ್ರದರ್ಶನ ನೀಡಲಿದ್ದಾರೆ ಎಂದು ತಿಳಿಸಿದ್ದಾರೆ.

*********

ಕೋಲಾರ ಜಿಲ್ಲೆಯ ಕೆಜಿಎಫ್‌ನ ಸಹಾಯಕ ಪ್ರಾದೇಶಿಕ ಸಾರಿಗೆ ಇಲಾಖೆಯ ನೂತನ ಕಚೇರಿ ಮತ್ತು ಸ್ವಯಂಚಾಲಿತ ವಾಹನ ಚಾಲನಾ ಡಿಜಿಟಲ್ ಟ್ರ್ಯಾಕ್ ಅನ್ನು ನಾಳೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಉದ್ಘಾಟಿಸಲಿದ್ದಾರೆ. ಜಿಲ್ಲೆಯಲ್ಲಿ ಮೊದಲ ಬಾರಿಗೆ ಸ್ವಯಂಚಾಲಿತ ವಾಹನ ಚಾಲನಾ ಪಥವನ್ನು ಸ್ಥಾಪಿಸಲಾಗಿದೆ. ಕೆಜಿಎಫ್ ಸಹಾಯಕ ಪ್ರಾದೇಶಿಕ ಕಚೇರಿ ಕೆಜಿಎಫ್, ಬಂಗಾರಪೇಟೆ, ಮಾಲೂರು ಸೇರಿ ೩ ತಾಲೂಕುಗಳನ್ನು ಒಳಗೊಂಡಿದೆ.

*********

ಕೊಪ್ಪಳ ಜಿಲ್ಲೆಯ ಧಾರ್ಮಿಕ ಕ್ಷೇತ್ರ ಹುಲಿಗೆಮ್ಮ ದೇವಾಲಯದಲ್ಲಿ ನಿನ್ನೆ ಸಂಜೆ ತುಂಗಭದ್ರಾ ಅರತಿ ಮಹೋತ್ಸವ ವಿಜೃಂಭಣೆಯಿಂದ ನಡೆಯಿತು. ಹಿಂದೂ ಧಾರ್ಮಿಕ ದತ್ತಿ ಇಲಾಖೆ, ಕೊಪ್ಪಳ ಜಿಲ್ಲಾಡಳಿತ ಹಾಗೂ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಇದೇ ಮೊದಲ ಬಾರಿಗೆ ತುಂಗಭದ್ರ ಆರತಿ ಮಹೋತ್ಸವ ಹಮ್ಮಿಕೊಳ್ಳಲಾಗಿತ್ತು. ಗಂಗಾ ಆರತಿಯ ೧೫ ಅರ್ಚಕರು ಈ ತುಂಗಭದ್ರಾ ಆರತಿ ಮಹೋತ್ಸವವನ್ನು ನೆರವೇರಿಸಿದರು. ಸಾವಿರಾರು ಭಕ್ತರು ಕಾರ್ಯಕ್ರಮಕ್ಕೆ ಸಾಕ್ಷಿಯಾಗಿದ್ದರು.

*********

ಮಹಾರಾಜ ಟ್ರೋಫಿ ಟಿ-೨೦ ಕ್ರಿಕೆಟ್ ಟೂರ್ನಿಯ ಎಲಿಮಿನೇಟರ್ ಪಂದ್ಯದಲ್ಲಿ ನಿನ್ನೆ ಗೆಲುವು ಸಾಧಿಸಿರುವ ಬೆಂಗಳೂರು ಬಸ್ವರ್ಸ್ ತಂಡ, ಫೈನಲ್‌ಗೆ ಪ್ರವೇಶ ಪಡೆಯಲು ಇಂದು ನಡೆಯುವ ಎರಡನೇ ಕ್ವಾಲಿಫೈರ್ ಪಂದ್ಯದಲ್ಲಿ ಮಂಗಳೂರು ಡ್ರ್ಯಾಗನ್ಸ್ ತಂಡದ ವಿರುದ್ಧ ಸೆಣಸಾಟ ನಡೆಸಲಿದೆ. ಪಂದ್ಯ ಇಂದು ರಾತ್ರಿ ೭.೧೫ಕ್ಕೆ ಆರಂಭವಾಗಲಿದೆ.

*****END****